ಧಾರವಾಡ ಜಿಲ್ಲೆಯಲ್ಲಿ ಜಿಲ್ಲಾ ಪರಿಷತ್ತಿನಿಂದ ಲೋಕೋಪಯೋಗಿ ಇಲಾಖೆಗೆ ರಸ್ತೆಯ ವರ್ಗಾವಣೆ

1038 - ಶ್ರೀ ಪಿ.ಸಿ. ಸಿದ್ದನಗೌಡ (ಕಲಘಟಗಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) *ಧಾರವಾಡ ಜಿಲ್ಲೆಯಲ್ಲಿ ಜಿಲ್ಲಾ ಪರಿಷತ್ತಿನಿಂದ ಲೋಕೋಪಯೋಗಿ ಇಲಾಖೆಗೆ ಎಷ್ಟು ಕಿಲೋಮೀಟರ್ ಉದ್ದದ ರಸ್ತೆಯನ್ನು ವರ್ಗಾಯಿಸಿಕೊಡಲಾಗಿದೆ?*

ಆ) *ಹಾಗಿದ್ದಲ್ಲಿ ಈ ರಸ್ತೆಯನ್ನು ಲೋಕೋಪಯೋಗಿ ಇಲಾಖೆಯವರು ತೆಗೆದುಕೊಂಡಿದ್ದಾರೆಯೇ?*

ಇ) *ತೆಗೆದುಕೊಂಡಿದ್ದಲ್ಲಿ ಈ ರಸ್ತೆಯನ್ನು ದುರಸ್ತಿ ಮಾಡಲು ಕೈಗೊಂಡಿರುವ ಕ್ರಮಗಳೇನು?*

ಶ್ರೀ ಎಸ್.ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಒಟ್ಟು 143.80 ಕಿ.ಮೀ. ಉದ್ದದ 10 ರಸ್ತೆಗಳನ್ನು ಜುಲೈ 87ರಲ್ಲಿ **ಮೇಲ್ದರ್ಜೆಗೆ** ಏರಿಸಿ ಲೋಕೋಪಯೋಗಿ ಇಲಾಖೆ ವ್ಯಾಪ್ತಿಗೆ ಜುಲೈ 87ರಲ್ಲಿ ವರ್ಗಾಯಿಸಿದೆ.

ಆ) ಹೌದು.

ಇ) ರಸ್ತೆಗಳ ನಿರ್ವಹಣೆಗಾಗಿ ನೀಡಲಾಗುವ ನಿರ್ವಹಣಾ ಅನುದಾನದಲ್ಲಿ ಈ ರಸ್ತೆಗಳ ದುರಸ್ತಿಯನ್ನು ಕೈಗೊಳ್ಳಲಾಗಿದೆ. ಹಾಗೂ ಪ್ರತಿ ಕ್ಷೇತ್ರಕ್ಕೆ ರೂ.12 ಲಕ್ಷ ಕಾಮಗಾರಿಗಳಲ್ಲೂ ಸಹ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ತೆಗೆದುಕೊಳ್ಳಲಾಗಿದೆ.

ಸೆರೆವಾಡ - ಸವಣೂರು ರಸ್ತೆಯ ದುಸ್ಥಿತಿ ಕುರಿತು

1089 - ಶ್ರೀ ಪಿ.ಸಿ. ಸಿದ್ದನಗೌಡರ್ (ಕಲಘಟಗಿ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಧಾರವಾಡ ಜಿಲ್ಲೆಯಲ್ಲಿ ಬರುವ ಸೆರೆವಾಡ - ಸವಣೂರು ರಸ್ತೆಯು ದುಸ್ಥಿತಿಯಲ್ಲಿರುವುದು ಸರ್ಕಾರಕ್ಕೆ ತಿಳಿದಿದೆಯೇ?*

ಆ) *ಹಾಗಿದ್ದಲ್ಲಿ ಈ ರಸ್ತೆಯನ್ನು ದುರಸ್ತಿ ಮಾಡಲು ಸರ್ಕಾರದ ಮುಂದಿರುವ ಕಾರ್ಯಕ್ರಮಗಳೇನು?*

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಜಿಲ್ಲಾ ಪರಿಷತ್ತಿನ ವ್ಯಾಪ್ತಿಯಲ್ಲಿ ಬರುವ ಈ ಗ್ರಾಮಾಂತರ ರಸ್ತೆಯು ನಾದುರಸ್ಥಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ) ಈ ರಸ್ತೆಯ ಒಟ್ಟು 42.5 ಕಿ.ಮೀ ಉದ್ದದಲ್ಲಿ 11.60 ಕಿ.ಮೀ. ಉದ್ದಕ್ಕೆ ಡಾಂಬರಿನ ರಸ್ತೆಯಿದ್ದು ಮತ್ತು 32 ಕಿ.ಮೀ. ಉದ್ದಕ್ಕೆ ಡಾಂಬರೀಕರಣ ಮಾಡಲು 1990Ë91ನೇ ಸಾಲಿನಲ್ಲಿ ಮಂಜೂರಾತಿ ಮಾಡಲಾಗಿದೆ. 1 ಕಿ.ಮೀ. ಉದ್ದಕ್ಕೆ ಮರು (ಜಲ್ಲಿ) ಹಾಕುವ ಕಾಮಗಾರಿಯು ಪ್ರಗತಿಯಲ್ಲಿದೆ. ಅನುದಾನದ ಲಭ್ಯತೆಯನ್ನು ಅನುಸರಿಸಿ ಈ ರಸ್ತೆಯನ್ನು ನಿರ್ವಹಣೆ ಮಾಡಲಾಗುವುದು.

ಬೆಳಗಾವಿ ಜಿಲ್ಲೆಯ ಬೈಲಹೊಂಗಲ ಮತ್ತು ಸವದತ್ತಿ ತಾಲ್ಲೂಕಿನ ನೀರಾವರಿ ಇಲಾಖೆಯಲ್ಲಿ ಬರುವ ರಸ್ತೆಗಳ ರಿಪೇರಿ

271 - ಶ್ರೀ ಶಿವಾನಂದ ಎಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲ್ಲೂಕು ಹಾಗೂ ಸವದತ್ತಿ ತಾಲ್ಲೂಕಿನ*

1) ಇಂಗಳಗಿ ಅನಿಗೋಳ ರಸ್ತೆ.